





ದಿನಾಂಕ:12-03-2023 ರಂದು ಮಾನ್ಯ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿ ರವರು ಧಾರವಾಡದ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ನೂತನ ಕಟ್ಟಡದ ಉದ್ಘಾಟನೆ ಮಾಡಿದರು. ರಾಜ್ಯದ ಮೊದಲ ಹಾಗೂ ದೇಶದ ಪ್ರಪ್ರಥಮ ಹಸಿರು ಐಐಟಿ ಎಂಬ ಖ್ಯಾತಿಗೆ ಇದು ಒಳಗಾಗಿದೆ. ಇದೇ ವೇದಿಕೆಯಲ್ಲಿ ’ಶ್ರೀ ಸಿದ್ಧಾರೂಢ ಸ್ವಾಮೀಜಿ ರೈಲ್ವೆ ನಿಲ್ದಾಣ’ದಲ್ಲಿ ನಿರ್ಮಾಣವಾಗಿರುವ 1.5 ಕಿ.ಮೀ ಉದ್ದದ ’ವಿಶ್ವದ ಅತಿ ಉದ್ದದ ರೈಲ್ವೆ ಪ್ಲಾಟ್ ಫಾರ್ಮ್ ಲೋಕಾರ್ಪಣೆಗೊಳಿಸಿದರು. ಜೊತೆಗೆ ಹಂಪಿ ಸ್ಮಾರಕ ಮಾದರಿಯ ಹೊಸಪೇಟೆ ರೈಲು ನಿಲ್ದಾಣಕ್ಕೂ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾನ್ಯ ಸಂಸದೀಯ ವ್ಯವಹಾರ, ಗಣಿ ಮತ್ತು ಕಲ್ಲಿದ್ದಲ್ಲು ಸಚಿವರಾದ ಶ್ರೀ ಪ್ರಹ್ಲಾದ್ ಜೋಷಿ, ಮಾನ್ಯ ವಿಧಾನ ಪರಿಷತ್ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ, ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ, ಮಾನ್ಯ ಜಲಸಂಪನ್ಮೂಲ ಸಚಿವರಾದ ಶ್ರೀ ಗೋವಿಂದ ಎಂ.ಕಾರಜೋಳ, ಮಾನ್ಯ ಲೋಕೋಪಯೋಗಿ ಸಚಿವರಾದ ಶ್ರೀ ಸಿ.ಸಿ ಪಾಟೀಲ, ಮಾನ್ಯ ವಸತಿ ಸಚಿವರಾದ ಶ್ರೀ ವಿ. ಸೋಮಣ್ಣ, ಮಾನ್ಯ ನಗರಾಭಿವೃದ್ಧಿ ಸಚಿವರಾದ ಶ್ರೀ ಬಿ.ಎ ಬಸವರಾಜ, ಮಾನ್ಯ ಕೈಮಗ್ಗ, ಜವಳಿ ಮತ್ತು ಸಕ್ಕರೆ ಸಚಿವರಾದ ಶ್ರೀ ಶಂಕರಪಾಟೀಲ್ ಮುನೇನಕೊಪ್ಪ, ಮಾಜಿ ಮುಖ್ಯಮಂತ್ರಿ ಹಾಗೂ ಶಾಸಕರಾದ ಶ್ರೀ ಜಗದೀಶ್ ಶೆಟ್ಟರ್, ಮಾನ್ಯ ಶಾಸಕರುಗಳಾದ ಶ್ರೀ ಸಿ.ಎಂ.ನಿಂಬಣ್ಣವರ, ಶ್ರೀ ಅರವಿಂದ ಬೆಲ್ಲದ, ಶ್ರೀ ಅಮೃತ ದೇಸಾಯಿ ಹಾಗೂ ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ವಿ.ಸಂಕನೂರ ರವರುಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.